ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 01 V2 ಸಿಡಿಸಿ (2) 2017-18 / 14788 167

ನಿರ್ದೇಶಕರ ಕಛೇರಿ
ಅರಮನೆ ರಸ್ತೆ
ಬೆಂಗಳೂರು 560 001
ದಿ: 23-12-2017

-:ಸುತ್ತೋಲೆ:-

ವಿಷಯ: ಬಿ.ಎಂ.ಎಸ್. ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು ಇಲ್ಲಿ ಹಮ್ಮಿಕೊಂಡಿರುವ ಅಲ್ಪಾವಧಿ ತರಬೇತಿ ಕಾರ್ಯಕ್ರಮಕ್ಕೆ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ: ಪ್ರಾಚಾರ್ಯರು, ಬಿ.ಎಂ.ಎಸ್. ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು ಇವರ ಪತ್ರ ಸಂ: BMS/ME-STTP/2017-18, ದಿ: 22-12-2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ ಬಿ.ಎಂ.ಎಸ್. ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು ಇಲ್ಲಿ ದಿನಾಂಕ:08-01-2018 ರಿಂದ ದಿನಾಂಕ:12-01-2018ರವರೆಗೆ "FINITE ELEMENT ANALYSIS AND SIMULATION" ಎಂಬ ವಿಷಯದ ಬಗ್ಗೆ ರಾಜ್ಯದ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಅಲ್ಪಾವಧಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಉದ್ದೇಶಿಸಿದ್ದು, ಸದರಿ ಅಲ್ಪಾವಧಿ ತರಬೇತಿ ಕಾರ್ಯಕ್ರಮವನ್ನು ಸಂಸ್ಥೆಯಲ್ಲಿ ಆಯೋಜಿಸಲು ಅನುಮತಿ ನೀಡಲಾಗಿದೆ.

ಸದರಿ ಅಲ್ಪಾವಧಿ ತರಬೇತಿಗೆ ಹಾಜರಾಗಲು ಇಚ್ಛಿಸುವ ಬೋಧಕ ಸಿಬ್ಬಂದಿ ವರ್ಗದವರು, ತರಬೇತಿಗೆ ಅರ್ಜಿ ಸಲ್ಲಿಸಿ ನೊಂದಾಯಿಸಿಕೊಳ್ಳುವ ಸಲುವಾಗಿ ಸಂಯೋಜನಾಧಿಕಾರಿಯಾದ ಡಾ॥ ಶಿವಕುಮಾರ್ ಆರ್ ಶ್ರೀವಾಸ್ತ, ಸಹಾಯಕ ಪ್ರಾಧ್ಯಾಪಕರು, ಮೆಕ್ಯಾನಿಕಲ್ ವಿಭಾಗ, ಬಿ. ಎಂ. ಎಸ್. ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು ಇವರನ್ನು ಮೊಬೈಲ್ ಸಂಖ್ಯೆ: 9448200887 ಅಥವಾ ಈ-ಮೇಲ್ ಐಡಿ shivashankarsrivasta.mech@bmsce.ac.in ಮೂಲಕ ಸಂಪರ್ಕಿಸಲು ಸೂಚಿಸಲಾಗಿದೆ.

ತರಬೇತಿಯನ್ನು ಆಯೋಜಿಸಿರುವ ಸಂಸ್ಥೆಯ ಪ್ರಾಚಾರ್ಯರು, ತರಬೇತಿಗೆ ಆಯ್ಕೆಗೊಂಡ ಸರ್ಕಾರಿ/ಅನುದಾನಿತ ಸಂಸ್ಥೆಗಳ ಬೋಧಕ ಸಿಬ್ಬಂದಿ ವರ್ಗದವರ ಪಟ್ಟಿಗೆ ದಿನಾಂಕ:03-01-2018ರೊಳಗಾಗಿ ನಿರ್ದೇಶನಾಲಯದ ಅನುಮೋದನೆ ಪಡೆದು ತರಬೇತಿ ನಡೆಸಲು ಸೂಚಿಸಲಾಗಿದೆ. ಈ ಅಲ್ಪಾವಧಿ ತರಬೇತಿಗೆ ಇಲಾಖೆಯಿಂದ ಯಾವುದೇ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆಗಳನ್ನು ನೀಡುವುದಿಲ್ಲ.

ಜಂಟಿ ನಿರ್ದೇಶಕರು(ಸಿಡಿಸಿ)

ರಿಗೆ:- ಪ್ರಾಚಾರ್ಯರು, ಬಿ. ಎಂ. ಎಸ್. ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

1. ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ/ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು ಇವರಿಗೆ ಡಿಟಿಇ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.